**All India Radio: Bangalore**
**National Bulletin In Kannada**
**09.09.2025  19.35 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**09.09.2025  19.35 p.m.**

**<><><><>**

ಮುಖ್ಯಾಂಶಗಳು

- ಉಪ ರಾಷ್ಟ್ರಪತಿ ಚುನಾವಣೆ: ಮತದಾನ ಪೂರ್ಣ, ಮತ ಎಣಿಕೆ ಪ್ರಗತಿಯಲ್ಲಿ
- ಪ್ರವಾಹ ಪೀಡಿತ ಪಂಜಾಬ್‌ಗೆ ಒಂದು ಸಾವಿರದ ೬೦೦ ಕೋಟಿ ರೂಪಾಯಿ ಪರಿಹಾರ ಘೋಷಿಸಿದ ಪ್ರಧಾನಿ
- ನೇಪಾಳದಲ್ಲಿ ವ್ಯಾಪಕ ಪ್ರತಿಭಟನೆ: ಪ್ರಧಾನಿ, ರಾಷ್ಟ್ರಪತಿ ರಾಜೀನಾಮೆ
- ಏಷ್ಯಾ ಕಪ್ ಕ್ರಿಕೆಟ್: 'ಬಿ' ಗುಂಪಿನ ಪಂದ್ಯದಲ್ಲಿಂದು  ಅಫ್ಘಾನಿಸ್ತಾನ-ಹಾಂಕಾಂಗ್ ಮುಖಾಮುಖಿ

<><><><>

ನೂತನ ಉಪ ರಾಷ್ಟ್ರಪತಿ ಆಯ್ಕೆಗಾಗಿ ನಡೆದ ಚುನಾವಣೆಯ ಮತದಾನ ಪೂರ್ಣಗೊಂಡಿದ್ದು, ಮತ ಎಣಿಕೆ ಕಾರ್ಯ ಪ್ರಗತಿಯಲ್ಲಿದೆ. ಚುನಾವಣಾ ಕಣದಲ್ಲಿ ಎನ್‌ಡಿಎ ಅಭ್ಯರ್ಥಿ ಮಹಾರಾಷ್ಟ್ರ ರಾಜ್ಯಪಾಲರಾದ ಸಿ.ಪಿ. ರಾಧಾಕೃಷ್ಣನ್ ಹಾಗೂ ಐಎನ್‌ಡಿಐ ಮೈತ್ರಿಕೂಟದ ಅಭ್ಯರ್ಥಿ ಬಿ.ಸುದರ್ಶನ್ ರೆಡ್ಡಿ ಸ್ಪರ್ಧಿಸಿದ್ದಾರೆ. ಬಿ.ಸುದರ್ಶನ್ ರೆಡ್ಡಿಯವರು ಸುಪ್ರೀಂ ಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿಗಳಾಗಿದ್ದಾರೆ. ನೂತನ ಸಂಸತ್ ಭವನದಲ್ಲಿ ಇಂದು ಬೆಳಗ್ಗೆ ೧೦ ಗಂಟೆಯಿಂದ ಸಂಜೆ ೫ ಗಂಟೆಯವರೆಗೆ ಮತದಾನ ನಡೆಯಿತು. ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವರಾದ ರಾಜನಾಥ್ ಸಿಂಗ್, ಅಶ್ವಿನಿ ವೈಷ್ಣವ್, ಜಿತೇಂದ್ರ ಸಿಂಗ್, ಪ್ರಲ್ಹಾದ್ ಜೋಶಿ, ರಾಜ್ಯಸಭಾ ಉಪಸಭಾಪತಿ ಹರಿವಂಶ್, ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ, ರಾಜ್ಯಸಭೆ ವಿರೋಧಪಕ್ಷ ನಾಯಕ ಮಲ್ಲಿಕಾರ್ಜುನ್ ಖರ್ಗೆ, ಲೋಕಸಭೆ ವಿರೋಧಪಕ್ಷ ನಾಯಕ ರಾಹುಲ್‌ಗಾಂಧಿ, ಕಾಂಗ್ರೆಸ್ ಹಿರಿಯ ಸಂಸದೆ ಸೋನಿಯಾ ಗಾಂಧಿ, ಡಿ.ಎಂ.ಕೆ. ಸಂಸದ ದಯಾನಿಧಿ ಮಾರನ್, ಸಮಾಜವಾದಿ ಪಕ್ಷದ ರಾಮ್‌ಗೋಪಾಲ್ ಯಾದವ್, ಜೆಡಿಯು ನಾಯಕ ಸಂಜಯ್ ಝಾ ಸೇರಿದಂತೆ ಅನೇಕರು ಮತ ಚಲಾಯಿಸಿದರು.

<><><><>

ಪ್ರಧಾನಿ ನರೇಂದ್ರ ಮೋದಿ ಅವರು, ಇಂದು ಪ್ರವಾಹ ಪೀಡಿತ ಹಿಮಾಚಲ ಪ್ರದೇಶ ಮತ್ತು ಪಂಜಾಬ್‌ಗೆ ಭೇಟಿ ನೀಡಿ, ಪರಿಸ್ಥಿತಿಯನ್ನು ಅವಲೋಕಿಸಿದರು. ಪ್ರವಾಹ ಪೀಡಿತ ಪಂಜಾಬ್‌ಗೆ ೧ ಸಾವಿರದ ೬೦೦ ಕೋಟಿ ರೂಪಾಯಿಗಳ ಆರ್ಥಿಕ ನೆರವನ್ನು ಪ್ರಧಾನಿ ಘೋಷಿಸಿದ್ದಾರೆ. ಇದರ ಜೊತೆಗೆ ಈಗಾಗಲೇ ೧೨ ಸಾವಿರ ಕೋಟಿ ರೂಪಾಯಿಗಳನ್ನು ಪಂಜಾಬ್‌ಗೆ ಒದಗಿಸಲಾಗಿದೆ. ಅಲ್ಲದೇ ಎಸ್‌ಡಿಆರ್‌ಎಫ್ ಮತ್ತು ಪಿಎಂ ಕಿಸಾನ್ ಸಮ್ಮಾನ್ ನಿಧಿಯ ೨ನೇ ಕಂತಿನ ಮುಂಗಡ ನೆರವು ಕೂಡ ಬಿಡುಗಡೆಯಾಗಲಿದೆ. ಪ್ರಕೃತಿ ವಿಕೋಪದಲ್ಲಿ ಮೃತರ ಕುಟುಂಬಗಳಿಗೆ ತಲಾ ೨ ಲಕ್ಷ ರೂಪಾಯಿ ಪರಿಹಾರ ಹಾಗೂ ಗಂಭೀರವಾಗಿ ಗಾಯಗೊಂಡವರಿಗೆ ೫೦ ಸಾವಿರ ರೂಪಾಯಿ ಪರಿಹಾರವನ್ನು ಪ್ರಧಾನಿ ಘೋಷಿಸಿದ್ದಾರೆ. ಪ್ರವಾಹದಿಂದ ಅನಾಥರಾದ ಮಕ್ಕಳಿಗೆ 'ಪಿಎಂ ಕೇರ್ಸ್ ಫಾರ್ ಚಿಲ್ಡ್ರನ್ಸ್' ಯೋಜನೆಯಡಿಯಲ್ಲಿ ಸಮಗ್ರ ಬೆಂಬಲವನ್ನು ನೀಡಲಾಗುವುದು ಎಂದು ಪ್ರಧಾನಿ ತಿಳಿಸಿದರು.

ಪ್ರಧಾನಿಯವರು ಪಂಜಾಬ್‌ನ ಗುರುದಾಸ್‌ಪುರಕ್ಕೆ ಆಗಮಿಸಿ, ಪ್ರವಾಹ ಪೀಡಿತ ಪ್ರದೇಶಗಳಲ್ಲಿನ ಪರಿಸ್ಥಿತಿಯನ್ನು ಅವಲೋಕಿಸಿದರು. ಪಂಜಾಬ್‌ಗೆ ಆಗಮಿಸಿದ ಪ್ರಧಾನಿಯವರನ್ನು ಪಂಜಾಬ್ ರಾಜ್ಯಪಾಲ ಗುಲಾಬ್‌ಚಂದ್ ಕಟಾರಿಯಾ, ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಕುಲ್‌ದೀಪ್ ಸಿಂಗ್ ದಲಿವಾಲ್, ಪಶುಸಂಗೋಪನಾ ಸಚಿವ ಗುರ್‌ನೀತ್ ಸಿಂಗ್ ಖುಡಿಯನ್, ಬಿಜೆಪಿ ನಾಯಕರು ಸೇರಿದಂತೆ ಅಧಿಕಾರಿಗಳು ಆತ್ಮೀಯವಾಗಿ ಸ್ವಾಗತಿಸಿದರು. ಇದಕ್ಕೂ ಮುನ್ನ ಹಿಮಾಚಲ ಪ್ರದೇಶದ ಕಾಂಗ್ರಾಗೆ ಭೇಟಿ ನೀಡಿದ ಪ್ರಧಾನಿ, ಅಲ್ಲಿನ ಪರಿಸ್ಥಿತಿಯನ್ನು ಪರಿಶೀಲಿಸಿದರು. ಪ್ರವಾಹ ಪೀಡಿತ ಹಿಮಾಚಲ ಪ್ರದೇಶಕ್ಕೆ ಪ್ರಧಾನಿ ೧ ಸಾವಿರದ ೫೦೦ ಕೋಟಿ ರೂಪಾಯಿ ಆರ್ಥಿಕ ನೆರವು ಘೋಷಿಸಿದ್ದಾರೆ.

<><><><>

ನೇಪಾಳ ದೇಶಾದ್ಯಂತ ವ್ಯಾಪಕ ಹಿಂಸಾತ್ಮಕ ಪ್ರತಿಭಟನೆಗಳ ನಡುವೆ ನೇಪಾಳ ಪ್ರಧಾನಿ ಕೆ.ಪಿ. ಶರ್ಮಾ ಓಲಿ ಹಾಗೂ ನೇಪಾಳ ರಾಷ್ಟ್ರಪತಿ ರಾಮಚಂದ್ರ ಪೌಡಲ್, ತಮ್ಮ ಸ್ಥಾನಗಳಿಗೆ ರಾಜೀನಾಮೆ ನೀಡಿದ್ದಾರೆ. ನೂರಾರು ಪ್ರತಿಭಟನಾಕಾರರು ಸರ್ಕಾರಿ ವಿರೋಧಿ ಘೋಷಣೆಗಳನ್ನು ಕೂಗುತ್ತಾ ಅವರ ಕಚೇರಿಗಳಿಗೆ ನುಗ್ಗಿದ ನಂತರ ಓಲಿ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮಗಳ ಮೇಲಿನ ಸರ್ಕಾರದ ನಿಷೇಧದ ವಿರುದ್ಧದ

ಪ್ರತಿಭಟನೆಗಳ ಸಂದರ್ಭದಲ್ಲಿ ನಡೆದ ಸಾವುಗಳಿಗೆ ಸರ್ಕಾರವೇ ಹೊಣೆ ಎಂದು ಆರೋಪಿಸಿ, ಪ್ರತಿಭಟನಾಕಾರರು ಬಾಲ್‌ಕೋಟ್‌ನಲ್ಲಿರುವ ನೇಪಾಳ ಪ್ರಧಾನಿ ಅವರ ಖಾಸಗಿ ನಿವಾಸಕ್ಕೆ ಬೆಂಕಿ ಹಚ್ಚಿದರು. ಅನೇಕ ಯುವ ಪ್ರತಿಭಟನಾಕಾರರು ಕಠ್ಮಂಡು ಮತ್ತು ಇತರೆ ಜಿಲ್ಲೆಗಳಲ್ಲಿನ ರಾಜಕೀಯ ನಾಯಕರು ಮತ್ತು ಸಚಿವರ ನಿವಾಸಗಳನ್ನು ಗುರಿಯಾಗಿಸಿಕೊಂಡು ಕಲ್ಲು ತುರಾಟ ನಡೆಸಿ, ಆಸ್ತಿಗೆ ಬೆಂಕಿ ಹಚ್ಚಿದರು. ನಿಷೇಧಾಜ್ಞೆ ನಡುವೆಯೂ ಪ್ರತಿಭಟನಾಕಾರರು ಕಠ್ಮಂಡು, ಲಲಿತಾಪುರ, ಭಕ್ತಪುರ ಸೇರಿದಂತೆ ಅನೇಕ ಜಿಲ್ಲೆಗಳಲ್ಲಿ ಪ್ರತಿಭಟನೆ ನಡೆಸಿದರು. ನ್ಯೂ ಬನೇಶ್ವರದಲ್ಲಿರುವ ಸಂಸತ್ತಿನ ಕಟ್ಟಡದ ಬಳಿ ಸಾವಿರಾರು ಯುವಕರು ಪ್ರತಿಭಟನೆ ನಡೆಸಿ ಘೋಷಣೆಗಳನ್ನು ಕೂಗಿದರು. ರೌತಹತ್ ಜಿಲ್ಲೆಯಲ್ಲಿ ಪೊಲೀಸರು ಮತ್ತು ಪ್ರತಿಭಟನಾಕಾರರ ನಡುವೆ ಘರ್ಷಣೆ ಉಂಟಾಗಿದ್ದು, ಪ್ರತಿಭಟನಾಕಾರರು ಪೊಲೀಸ್ ವಾಹನಕ್ಕೆ ಬೆಂಕಿ ಹಚ್ಚಿದರು. ಕಠ್ಮಂಡು ವಿಮಾನ ನಿಲ್ದಾಣ ಬಂದ್ ಆಗಿರುವ ಹಿನ್ನೆಲೆಯಲ್ಲಿ ದೆಹಲಿ ಮತ್ತು ಕಠ್ಮಂಡು ನಡುವೆ ಸಂಚರಿಸುವ ಏರ್ ಇಂಡಿಯಾ ಮತ್ತು ಇಂಡಿಗೋ ವಿಮಾನಗಳನ್ನು ರದ್ದುಗೊಳಿಸಲಾಗಿದೆ. ಪ್ರಸ್ತುತ ಸನ್ನಿವೇಶವನ್ನು ಗಣನೆಗೆ ತೆಗೆದುಕೊಂಡು ಈ ಕ್ರಮ ಕೈಗೊಳ್ಳಲಾಗಿದೆ ಎಂದು ಏರ್‌ಇಂಡಿಯಾ ಮತ್ತು ಇಂಡಿಗೋ ವಿಮಾನ ಸಂಸ್ಥೆಗಳು ತಿಳಿಸಿವೆ. ನೇಪಾಳದಲ್ಲಿ ಪರಿಸ್ಥಿತಿ ಸಹಜ ಸ್ಥಿತಿಗೆ ಬರುವವರೆಗೂ ನೇಪಾಳಕ್ಕೆ ಪ್ರವಾಸ ಅಥವಾ ಪ್ರಯಾಣ ಮಾಡದಂತೆ ವಿದೇಶಾಂಗ ಸಚಿವಾಲಯ ಭಾರತೀಯ ನಾಗರಿಕರಿಗೆ ಸಲಹೆ ನೀಡಿದೆ.

<><><><>

ನವದೆಹಲಿಯಲ್ಲಿಂದು ಕೇಂದ್ರ ಪರಿಸರ ಅರಣ್ಯ ಹವಾಮಾನ ಬದಲಾವಣೆ ಸಚಿವ ಭೂಪೇಂದ್ರ ಯಾದವ್ ಸ್ವಚ್ಛ ವಾಯು ಸರ್ವೇಕ್ಷಣಾ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು. ಇಂದೋರ್, ಜಬಲ್‌ಪುರ್, ಆಗ್ರಾ ಮತ್ತು ಸೂರತ್ ಪ್ರಶಸ್ತಿ ವಿಜೇತ ಪ್ರಮುಖ ನಗರಗಳಾಗಿವೆ. ವಿಶೇಷವಾಗಿ ಇಂದೋರ್ ಮತ್ತು ಉದಯ್‌ಪುರ, ರಾಮ್‌ಸರ್ ಸಮಾವೇಶದಡಿಯಲ್ಲಿ ಅಂತಾರಾಷ್ಟ್ರೀಯ ಮನ್ನಣೆಯನ್ನು ಪಡೆದಿವೆ. ಸಮಾರಂಭ ಉದ್ದೇಶಿಸಿ ಮಾತನಾಡಿದ ಸಚಿವ ಭೂಪೇಂದ್ರ ಯಾದವ್, ೧೩೦ ನಗರಗಳ ಪೈಕಿ ೧೦೩ ನಗರಗಳಲ್ಲಿ ಪಿಎಂ-೧೦ ಮಟ್ಟದಲ್ಲಿ ಗಾಳಿಯ ಗುಣಮಟ್ಟದಲ್ಲಿ ಸುಧಾರಣೆಯನ್ನು ಕಂಡಿದೆ ಎಂದು ಹೇಳಿದರು. ೨೦೧೭-೧೮ಲಕ್ಕೆ ಹೋಲಿಸಿದರೆ, ೨೦೨೪-೨೫ರಲ್ಲಿ

ಶೇಕಡ ೨೦ ರಷ್ಟು ಸುಧಾರಣೆಯನ್ನು ಸಾಧಿಸಿರುವ ೬೪ ನಗರಗಳನ್ನು ಹಾಗೂ ಶೇಕಡ ೪೦ ರಷ್ಟು ಸುಧಾರಣೆಯನ್ನು ಸಾಧಿಸಿರುವ ೨೫ ನಗರಗಳನ್ನು ಇದೇ ವೇಳೆ ಸಚಿವರು ಅಭಿನಂದಿಸಿದರು.

<><><><>

ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ನಾಳೆಯಿಂದ ಎರಡು ದಿನಗಳ ಕಾಲ ಯುನೈಟೆಡ್ ಅರಬ್ ಎಮಿರೇಟ್ಸ್‌ಗೆ ಭೇಟಿ ನೀಡಲಿದ್ದಾರೆ. ತಮ್ಮ ಭೇಟಿಯ ಮೊದಲ ದಿನದಂದು ಪ್ರಧಾನ್ ಅವರು ಅಬುದಾಬಿ ಶಿಕ್ಷಣ ಇಲಾಖೆಯ ಅಧ್ಯಕ್ಷೆ ಸಾರಾ ಮುಸಲಮ್ ಅವರನ್ನು ಭೇಟಿ ಮಾಡಲಿದ್ದಾರೆ. ನಂತರ ಅವರು, ಐಐಟಿ ದೆಹಲಿ-ಅಬುದಾಬಿ ಕ್ಯಾಂಪಸ್‌ಗೆ ಭೇಟಿ ನೀಡಲಿದ್ದಾರೆ. ಅಲ್ಲಿ ಅವರು, ಅಟಲ್ ಇನ್‌ಕ್ಯೂಬಿಯೇಷನ್ ಸೆಂಟರ್ ಅನ್ನು ಉದ್ಘಾಟಿಲಿಸದ್ದಾರೆ. ಇದೇ ವೇಳೆ ಅವರು, ವಿದ್ಯಾರ್ಥಿಗಳು ಮತ್ತು ಅಧ್ಯಾಪಕರೊಂದಿಗೆ ಸಂವಾದ ನಡೆಸಲಿದ್ದಾರೆ.

ತಮ್ಮ ಭೇಟಿಯ ೨ನೇ ದಿನದಂದು ಯುಎಇ ಶಿಕ್ಷಣ ಸಚಿವ ಡಾ. ಅಬ್ದುಲ್ ರೆಹಮಾನ್ ಅಲ್ ಅವರ್ ಅವರೊಂದಿಗೆ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್‌ನ ದುಬೈ ಕ್ಯಾಂಪಸ್ ಅನ್ನು ಉದ್ಘಾಟಿಸಲಿದ್ದಾರೆ.

<><><><>

ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರು, ನಾಳೆ ನವದೆಹಲಿಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಅತ್ಯಾಧುನಿಕ ವಿದ್ಯುತ್ ವಾಹನ ಪರೀಕ್ಷಾ ಸೌಲಭ್ಯವನ್ನು ಉದ್ಘಾಟಿಸಲಿದ್ದಾರೆ. ಈ ಸೌಲಭ್ಯವು ವಿಶೇಷವಾಗಿ ಪೂರ್ವ ಭಾರತದಲ್ಲಿ ವಿದ್ಯುತ್ ವಾಹನ ಬ್ಯಾಟರಿ ತಯಾರಿಕರಿಗೆ ವಿಶ್ವಾಸಾರ್ಹ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಲ್ಪಟ್ಟ ಪರೀಕ್ಷೆ ಮತ್ತು ಪ್ರಮಾಣೀಕರಣವನ್ನು ಒದಗಿಸುತ್ತದೆ. ಉತ್ಪನ್ನ ಸುರಕ್ಷತೆ, ಕಾರ್ಯಕ್ಷಮತೆಯನ್ನು ಖಚಿತಪಡಿಸುತ್ತದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳು ಆಹಾರ ಮತ್ತು ನಾಗರಿಕ ಸರಬರಾಜು ಸಚಿವಾಲಯ ತಿಳಿಸಿದೆ. ಈ ಸೌಲಭ್ಯದ ಸ್ಥಾಪನೆಯು ದೃಢವಾದ ವಿದ್ಯುತ್ ವಾಹನ ಪರಿಸರ ವ್ಯವಸ್ಥೆಯನ್ನು ಸೃಷ್ಟಿಸುವುದು, ಆಮದು ಅವಲಂಬನೆಯನ್ನು ಕಡಿಮೆ ಮಾಡುವುದು ಮತ್ತು ದೇಶೀಯ ತಯಾರಿಕರಿಗೆ ಕೈಗೆಟಕುವ ಪರೀಕ್ಷಾ ಸೇವೆಗಳೊಂದಿಗೆ ಸಬಲೀಕರಣಗೊಳಿಸುವ ಸರ್ಕಾರದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಸಚಿವಾಲಯ ಹೇಳಿದೆ.

<><><><>

ಇಂದಿನಿಂದ ಎಂಟು ದಿನಗಳ ಭಾರತ ಭೇಟಿಯ ಭಾಗವಾಗಿ ಮಾರಿಷಸ್ ಪ್ರಧಾನಿ ಡಾ. ನವೀನ್‌ಚಂದ್ರ ರಾಮಗೂಲಂ ಮತ್ತು ಅವರ ಪತ್ನಿ ವೀಣಾ ರಾಮಗೂಲಂ ಇಂದು ಮುಂಬೈಗೆ ಆಗಮಿಸಿದ್ದಾರೆ. ಪ್ರಧಾನಿ ರಾಮಗೂಲಂ ಅವರ ಪ್ರಸ್ತುತ ಅಧಿಕಾರಾವಧಿಯಲ್ಲಿ ಭಾರತಕ್ಕೆ ನೀಡುತ್ತಿರುವ ಮೊದಲ ದ್ವಿಪಕ್ಷೀಯ ಭೇಟಿ ಇದಾಗಿದೆ. ಅವರು ಈ ಹಿಂದೆ ೨೦೧೪ರ ಮೇ ತಿಂಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಪ್ರಮಾಣವಚನ ಸ್ವೀಕಾರ ಸಮಾರಂಭದಲ್ಲಿ ಭಾಗವಹಿಸಲು ಭಾರತಕ್ಕೆ ಭೇಟಿ ನೀಡಿದ್ದರು.

<><><><>

ಇಂದಿನಿಂದ ಏಷ್ಯಾಕಪ್ ಕ್ರಿಕೆಟ್ ಪಂದ್ಯಾವಳಿ ಆರಂಭವಾಗಲಿದೆ. ಬಿ ಗುಂಪಿನ ಮೊದಲ ಟಿ-೨೦ ಪಂದ್ಯದಲ್ಲಿಂದು ಅಫ್ಘಾನಿಸ್ತಾನ ಮತ್ತು ಹಾಂಕಾಂಗ್ ತಂಡಗಳು ಮುಖಾಮುಖಿಯಾಗಲಿವೆ. ಅಬುದಾಬಿಯ ಶೇಖ್ ಜಹೇದ್ ಕ್ರೀಡಾಂಗಣದಲ್ಲಿ ನಡೆಯುವ ಈ ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ.

<><><><>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ - ಸೆನ್ಸೆಕ್ಸ್ ೩೧೪ ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೮೧ ಸಾವಿರದ ೧೦೧ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ - ನಿಫ್ಟಿ ೯೫ ಅಂಕಗಳು ಏರಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೪ ಸಾವಿರದ ೮೬೮ ಅಂಕಗಳು ದಾಖಲಾಗಿದೆ. ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೮೮ ರೂಪಾಯಿ ೧೧ ಪೈಸೆಯಷ್ಟಾಗಿದೆ.

<><><><>

ಮಾನವೀಯತೆಯ ಆಧಾರದಲ್ಲಿ ಪಾಕಿಸ್ತಾನದ ೬೭ ಖೈದಿಗಳನ್ನು ಭಾರತ ಸ್ವದೇಶಕ್ಕೆ ಮರಳಿಸಿದೆ. ಅಮೃತಸರದ ಅಟ್ಟಾರಿ-ವಾಘಾ ಜಂಟಿ ಚೆಕ್‌ಪೋಸ್ಟ್‌ನಲ್ಲಿ ೫೩ ಪಾಕಿಸ್ತಾನಿ ಮೀನುಗಾರರು ಹಾಗೂ ೧೪ ಪಾಕಿಸ್ತಾನಿ ನಾಗರಿಕರನ್ನು ಪಾಕಿಸ್ತಾನದ ಅಧಿಕಾರಿಗಳಿಗೆ ಹಸ್ತಾಂತರಿಸಲಾಯಿತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>